ಇಂದು ಪತ್ರಿಕಾ ದಿನಾಚರಣೆ ಹಾಗೂ ಹಿರಿಯ ಪತ್ರಕರ್ತರಿಗೆ ಸನ್ಮಾನ ಸಮಾರಂಭ

ಬೆಂಗಳೂರು: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಂಗಸಂಸ್ಥೆಯಾದ ಬೆಂಗಳೂರು ನಗರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘವು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಜುಲೈ 11ರಂದು ಪತ್ರಿಕಾ ದಿನಾಚರಣೆ ಹಾಗೂ ಹಿರಿಯ ಪತ್ರಕರ್ತರಿಗೆ ಸನ್ಮಾನ ಸಮಾರಂಭವನ್ನು ಆಯೋಜಿಸಿದೆ.

ವಿಜಯನಗರದ ಮೆಟ್ರೋ ನಿಲ್ದಾಣದ ಸಮೀಪವಿರುವ ಶ್ರೀ ಆದಿಚುಂಚನಗಿರಿ ಕಲ್ಯಾಣ ಮಂಟಪದಲ್ಲಿ ಶನಿವಾರ ಬೆಳಿಗ್ಗೆ 11 ಗಂಟೆಗೆ ನಡೆಯಲಿರುವ ಈ ಕಾರ್ಯಕ್ರಮದಲ್ಲಿ ಮಾಧ್ಯಮ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿರುವ ಹಿರಿಯ ಪತ್ರಕರ್ತರನ್ನು ಸನ್ಮಾನಿಸಲಾಗುವುದು.

ಶ್ರೀ ಆದಿಚುಂಚನಗಿರಿ ಶಾಖಾಮಠದ ಶ್ರೀಶ್ರೀಶ್ರೀ ಸೌಮ್ಯನಾಥ ಸ್ವಾಮೀಜಿ ಅವರ ದಿವ್ಯ ಸಾನ್ನಿಧ್ಯದಲ್ಲಿ ನಡೆಯಲಿರುವ ಕಾರ್ಯಕ್ರಮವನ್ನು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಸಚಿವ ವಿ. ಸೋಮಣ್ಣ ಉದ್ಘಾಟಿಸಲಿದ್ದಾರೆ. ಕರ್ನಾಟಕ ಸರ್ಕಾರದ ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ಅವರು ನೂತನ ಸದಸ್ಯರಿಗೆ ಸದಸ್ಯತ್ವ ಗುರುತಿನ ಚೀಟಿಗಳನ್ನು ವಿತರಿಸಲಿದ್ದು, ಮಾಜಿ ಸಚಿವರು ಹಾಗೂ ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ಶಾಸಕ ಕೆ.ಗೋಪಾಲಯ್ಯ ಅವರು ಕಲಾತಂಡಗಳಿಗೆ ಚಾಲನೆ ನೀಡಲಿದ್ದಾರೆ. ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಎಸ್. ಸೋಮಶೇಖರ ಗಾಂಧಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ವಿಜಯವಾಣಿ ದಿನಪತ್ರಿಕೆಯ ಸಂಪಾದಕರಾದ ಕೆ.ಎನ್. ಚನ್ನೇಗೌಡ ಅವರು ದಿಕ್ಸೂಚಿ ನುಡಿ ನೀಡಲಿದ್ದು, ನಿಕಟಪೂರ್ವ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ. ಪ್ರಭಾಕರ್ ಹಿತನುಡಿ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಆಶಯ ನುಡಿಗಳನ್ನು ನೀಡಲಿದ್ದಾರೆ.

ಈ ಸಂದರ್ಭದಲ್ಲಿ ಚಲನಚಿತ್ರ ಛಾಯಾಗ್ರಾಹಕರಾದ ಕೆ.ಎನ್. ನಾಗೇಶ್ ಕುಮಾರ್, ವಿಜಯವಾಣಿ ಸಹಾಯಕ ಸಂಪಾದಕರಾದ ಪ್ರಭುದೇವ ಶಾಸ್ತ್ರಿಮಠ, ಟಿವಿ9 ಕನ್ನಡದ ಮುಖ್ಯ ನಿರ್ಮಾಪಕರಾದ ರಂಗನಾಥ ಭಾರದ್ವಾಜ್, ವಿಜಯ ಕರ್ನಾಟಕದ ವಿಶೇಷ ಪ್ರತಿನಿಧಿ ಕೀರ್ತಿ ಪ್ರಸಾದ್, ನ್ಯೂಸ್18 ಕನ್ನಡದ ಔಟ್ ಪುಟ್ ಎಡಿಟರ್ ಮಧು ಎಂ. ಉತ್ತುವಳ್ಳಿ, ಹಿರಿಯ ಪತ್ರಕರ್ತ ಐ.ಎಚ್. ಸಂಗಮದೇವ್, ಸ್ತ್ರೀ ಜಾಗೃತಿ ಪತ್ರಿಕೆಯ ಸಂಪಾದಕಿ ಹೆಚ್.ಸಿ. ಶೋಭ, ಸಂಜೆ ಸಮಾಚಾರದ ಸಂಪಾದಕರಾದ ಬಿ.ಎ. ಮಹೇಂದ್ರ, ಪೊಲೀಸ್ ನ್ಯೂಸ್ ಉಪ ಸಂಪಾದಕರಾದ ವೀರನ

ಗೌಡ ಹಾಗೂ ಅಮೂಲ್ಯವಾಣಿ ಪ್ರಧಾನ ಸಂಪಾದಕರಾದ ಜಿ.ವಿ. ರಾಮರಾವ್ ಅವರನ್ನು ಸನ್ಮಾನಿಸಲಾಗುವುದು.

ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಬೆಂಗಳೂರು ಘಟಕದ ನಿಕಟಪೂರ್ವ ಅಧ್ಯಕ್ಷ ಮಾಯಣ್ಣ, ಭಾರತೀಯ ಕಾರ್ಯನಿರತ ಪತ್ರಕರ್ತರ ಸಂಘದ ರಾಷ್ಟ್ರೀಯ ಅಧ್ಯಕ್ಷ ಬಿ.ವಿ. ಮಲ್ಲಿಕಾರ್ಜುನಯ್ಯ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಜಿ.ಸಿ. ಲೋಕೇಶ್, ಖಜಾಂಚಿ ವಾಸುದೇವ ಹೊಳ್ಳ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕ ಡಾ. ಬಿ.ಎಸ್. ಮಂಜುನಾಥ ಸ್ವಾಮಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಜಂಟಿ ನಿರ್ದೇಶಕಿ ಪಲ್ಲವಿ ಹೊನ್ನಾಪುರ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ.

ಪತ್ರಿಕಾ ದಿನಾಚರಣೆ ಹಾಗೂ ಹಿರಿಯ ಪತ್ರಕರ್ತರ ಸನ್ಮಾನ ಕಾರ್ಯಕ್ರಮಕ್ಕೆ ಮಾಧ್ಯಮ ಕ್ಷೇತ್ರದ ಬಂಧುಗಳು, ಪತ್ರಕರ್ತರು ಹಾಗೂ ಛಾಯಾಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಬೆಂಗಳೂರು ನಗರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಎಸ್. ಸೋಮಶೇಖರ ಗಾಂಧಿ, ಪ್ರಧಾನ ಕಾರ್ಯದರ್ಶಿ ಜಯಕುಮಾರ್ ಗೌಡ, ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಎಜ್.ಆರ್. ರವೀಶ್ ಹಾಗೂ ಕಾರ್ಯಕಾರಿ ಸಮಿತಿಯ ಸರ್ವ ಸದಸ್ಯರು ಮನವಿ ಮಾಡಿದ್ದಾರೆ.

ಸುದ್ದಿ ಹಾಗೂ ಜಾಹೀರಾತುಗಳಿಗೆ ಸಂಪರ್ಕಿಸಿ: 9535786812\8217606793

ದೇವಾಲಯ ಜೀವನೋದ್ಧಾರಕ್ಕೆ ಧರ್ಮಸ್ಥಳ ಸಂಸ್ಥೆಯ ಆರ್ಥಿಕ ನೆರವು

ತಾಂಡವಪುರ: ಮೈಸೂರು ಜಿಲ್ಲೆ, ನಂಜನಗೂಡು ತಾಲೂಕು ವರುಣಾ ವಿಧಾನಸಭಾ ಕ್ಷೇತ್ರಕ್ಕೆ ಸೇರುವ ಚಿಕ್ಕಯ್ಯನ ಛತ್ರ ಗ್ರಾಮದ ಶ್ರೀ ರಾಮಲಿಂಗ ಚೌಡೇಶ್ವರಿ ದೇವಾಲಯದ ಜೀರ್ಣೋಧರ ಮತ್ತು ಅಭಿವೃದ್ಧಿ ಕಾಮಗಾರಿಗೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ವತಿಯಿಂದ ಸುಮಾರು ಒಂದು ಲಕ್ಷ ರೂಗಳ ಧನಸಹಾಯದ ಚೆಕ್ಕನ್ನು ಸಂಸ್ಥೆಯ ಅಧಿಕಾರಿಗಳು ದೇವಾಲಯದ ಅಧ್ಯಕ್ಷರು ಉಪಾಧ್ಯಕ್ಷರು ಸದಸ್ಯರುಗಳಿಗೆ ಅಸ್ತಾಂತರ ಮಾಡುವ ಮೂಲಕ ವಿತರಣೆ ಮಾಡಿದರು

ಬಳಿಕ ಶ್ರೀ ಕತ್ರ ಧರ್ಮಸ್ಥಳ ಗ್ರಾಮ ಅಭಿವೃದ್ಧಿ ಜಿಲ್ಲಾ ಯೋಜನಾಧಿಕಾರಿಗಳಾದ ವಿಜಯಕುಮಾರ್ ನಾಗನಾಳ್ ರವರು ಮಾತನಾಡಿ ಶ್ರೀ ಕ್ಷೇತ್ರ ಧರ್ಮಸ್ಥಳ ಶ್ರೀ ವೀರೇಂದ್ರ ಹೆಗಡೆ ಹಾಗೂ ಅವರ ಪತ್ನಿ ಹೇಮ ರವರು ಧರ್ಮಸ್ಥಳ ಸ್ವಸಹಾಯ ಗುಂಪುಗಳನ್ನು ಸ್ಥಾಪಿಸುವ ಮೂಲಕ ಗ್ರಾಮೀಣ ಭಾಗದ ಮಹಿಳೆಯರಿಗೆ ಬಡವರಿಗೆ ಹಲವಾರು ಸಂಘ-ಸಂಸ್ಥೆಗಳ ಆಸರೆಯಾಗಿದ್ದಾರೆ

ಸಂಘ ಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಸಂಘಗಳಿಗೆ ಕಡಿಮೆ ಬಡ್ಡಿ ದರದಲ್ಲಿ ಶಾಲಾ ವಿತರಿಸಿ ಮಹಿಳಾ ಸ್ವಸಹಾಯ ಸಂಘಗಳ ಮಹಿಳೆಯರು ಆರ್ಥಿಕವಾಗಿ ಸ್ವಾವಲಂಬಿಯಾಗಿ ಬದುಕಲು ಸಹಕಾ-ರಿಯಾಗಿದ್ದಾರೆ ಅದೇ ರೀತಿ ನಮ್ಮ ಸಂಸ್ಥೆಯಿಂದ ಅಂಗನವಾಡಿ ಕಟ್ಟಡಕ್ಕೆ ಶಾಲಾ ಕಟ್ಟಡಕ್ಕೆ ದೇವಾಲಯದ ಜೀರ್ಣೋದ್ಧಾರ ಅಭಿವೃದ್ಧಿ ಕಾಮಗಾರಿಗೆ ಧನ ಸಹಾಯ ನೀಡುವ ಮೂಲಕ ಗ್ರಾಮೀಣ ಭಾಗದ ಸಂಘ ಸಂಸ್ಥೆಗಳಿಗೆ ಸಾರ್ವಜನಿಕರಿಗೆ ಆಸರೆಯಾಗಿದ್ದಾರೆ ಎಂದು ವಿಜಯ್ ಕುಮಾರ್ ರವರು ಸಂಸ್ಥೆಯ ಕಾರ್ಯವೈಕರಿಯನ್ನು ವಿವರವಾಗಿ ವಿವರಿಸಿದರು

ಇದೇ ವೇಳೆ ಮಾತನಾಡಿದ ಗ್ರಾಮ ಪಂಚಾಯತಿ ಮಾಜಿ ಸದಸ್ಯ ಎನ್ ಚಂದ್ರುರವರು ಧರ್ಮಸ್ಥಳ ಗ್ರಾಮಾ ಅಭಿವೃದ್ಧಿ ಸಂಸ್ಥೆ ವತಿಯಿಂದ ನಮ್ಮ ಗ್ರಾಮದ ಶ್ರೀ ರಾಮಲಿಂಗ ಚೌಡೇಶ್ವರಿ ದೇವಾಲಯಕ್ಕೆ ಸುಮಾರು ಒಂದು ಲಕ್ಷ ರೂಗಳ ಧನ ಸಹಾಯವನ್ನು ಮಾಡಿದ್ದಾರೆ ಅದೇ ರೀತಿ ಶಿಕ್ಷಕ ಧರ್ಮಸ್ಥಳ ಸಂಸ್ಥೆಯವರು ಇಡೀ ರಾಜ್ಯದಲ್ಲಿ ಎಲ್ಲೆಲ್ಲಿ ಶಿಥಿಲ ವ್ಯವಸ್ಥೆಯಲ್ಲಿರುವ ದೇವಾಲಯಗಳು ಅಂಗನವಾಡಿ ಕಟ್ಟಡಗಳು ಶಾಲಾ ಕಥೆಗಳನ್ನು ಗುರುತಿಸಿ ಅದರ ಜೀರ್ಣೋಧರಕ್ಕೆ ತಮ್ಮ ಕರೆದ ಮಟ್ಟಿಗೆ ಧನ ಸಹಾಯ ಮಾಡುವ ಮೂಲಕ ಗ್ರಾಮೀಣ ಭಾಗದ ಜನರಿಗೆ ಆಸರೆಯಾಗಿದ್ದಾರೆ ಎಂದು ಧರ್ಮಸ್ಥಳ ಸಂಸ್ಥೆಯ ಸೇವೆಗೆ ಮೆಚ್ಚುಗೆ ವ್ಯಕ್ತಪಡಿಸಿದರು

ಈ ಸಂದರ್ಭದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ತಾಲೂಕು ಯೋಜನಾಧಿಕಾರಿಗಳಾದ ಕೆ ಧರ್ಮರಾಜ್ ದೇವಾಲಯದ ಟ್ರಸ್ಟಿನ ಅಧ್ಯಕ್ಷರಾದ ಸಿಎನ್ ಮಂಜುನಾಥ್ ಉಪಾಧ್ಯಕ್ಷರಾದ ಟಿ ಬಂಗಾರ ರಾಜು ಖಜಾಂಚಿ ಬಿ ಶ್ರೀನಿವಾಸ್ ಕಾರ್ಯದರ್ಶಿಗಳಾದ ಹರೀಶ್ ಚಂದ್ರಶೇಖರ್ ಮಾಜಿ ಗ್ರಾಮಪಂಚ ಸದಸ್ಯ ಸಿಎನ್ ಚಂದ್ರು ಭಾಸ್ಕರ್ ಮುಖಂಡರಾದ ಗಾಣಿಗ ಮಹದೇವು ಪುಟ್ಟರಾಜು ರವಿ ಮಹದೇವ್ ಸಂಸ್ಥೆಯ ಮೇಲ್ವಿಚಾರಕರಾದ ಕೆಬಿ ಮರು ಳಶ ಶಿವ ಪ್ರತಿನಿಧಿ ರೇಖಾ ವಾಣಿ ಸೇರದಂತೆ ಧರ್ಮಸ್ಥಳ ಸಂಸ್ಥೆಯ ಮಹಿಳಾ ಸಂಘದ ಸದಸ್ಯರುಗಳು ಹಾಗೂ ಮುಂತಾದವರು ಹಾಜರಿದ್ದರು

ಎಸ್‌ಐಆರ್ ಕಾರ್ಯದಲ್ಲಿ ರಾಜ್ಯದಲ್ಲೇ ಮೊದಲ ಸ್ಥಾನ ಪಡೆದ ಚಿಕ್ಕಬಳ್ಳಾಪುರ

ಚಿಕ್ಕಬಳ್ಳಾಪುರ: ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ರಾಜ್ಯಾದ್ಯಂತ ನಡೆಯುತ್ತಿರುವ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಕಾರ್ಯದಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆ ಗಮನಾರ್ಹ ಸಾಧನೆ ಮಾಡಿದ್ದು, ಗಣತಿ ನಮೂನೆಗಳ ವಿತರಣೆ ಹಾಗೂ ಮತದಾರರ ಮಾಹಿತಿಯನ್ನು ಸಾಫ್ಟ್‌ವೇರ್‌ನಲ್ಲಿ ದಾಖಲಿಸುವ ಕಂಪ್ಯೂಟರೀಕರಣ ಕಾರ್ಯದಲ್ಲಿ ರಾಜ್ಯದಲ್ಲೇ ಮೊದಲ ಸ್ಥಾನವನ್ನು ಪಡೆದುಕೊಂಡಿದೆ ಎಂದು ಜಿಲ್ಲಾಧಿಕಾರಿ ಜಿ. ಪ್ರಭು ತಿಳಿಸಿದ್ದಾರೆ.

'ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್'ಗೆ ನೀಡಿದ ವಿಶೇಷ ಸಂದರ್ಶನದಲ್ಲಿ ಈ ಕುರಿತು ಮಾಹಿತಿ ನೀಡಿದ ಅವರು, ಜಿಲ್ಲೆಯಲ್ಲಿ ಒಟ್ಟು 10,69,504 ನೋಂದಾಯಿತ ಮತದಾರರಿದ್ದು, ಈ ಪೈಕಿ ಈಗಾಗಲೇ 10,31,113 ಮತದಾರರಿಗೆ ಗಣತಿ ನಮೂನೆಗಳನ್ನು ಯಶಸ್ವಿಯಾಗಿ ವಿತರಿಸಲಾಗಿದೆ ಎಂದು ತಿಳಿಸಿದರು.

ಪ್ರಸ್ತುತ ಜಿಲ್ಲೆಯಲ್ಲಿ ಗಣತಿ ನಮೂನೆಗಳ ವಿತರಣೆ ಕಾರ್ಯವು ಶೇ.97ರಷ್ಟು ಪೂರ್ಣಗೊಂಡಿದ್ದು, ಉಳಿದಿರುವ 38,391 ಮತದಾರರಿಗೂ ಮುಂದಿನ ಎರಡು ದಿನಗಳಲ್ಲಿ ನಮೂನೆಗಳನ್ನು ವಿತರಿಸಿ ಈ ಹಂತದ ಕಾರ್ಯವನ್ನು ಸಂಪೂರ್ಣಗೊಳಿಸುವ ಗುರಿ ಹೊಂದಲಾಗಿದೆ ಎಂದು ಅವರು ಹೇಳಿದರು.

ಭಾರತ ಚುನಾವಣಾ ಆಯೋಗವು ನಿಗದಿಪಡಿಸಿರುವ ಮಾರ್ಗಸೂಚಿಗಳ ಅನುಸಾರ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯವನ್ನು ಸಂಪೂರ್ಣ ಪಾರದರ್ಶಕತೆ, ನಿಖರತೆ ಹಾಗೂ ಕಾಲಮಿತಿಯೊಳಗೆ ಪೂರ್ಣಗೊಳಿಸಲು ಜಿಲ್ಲಾಡಳಿತ ಎಲ್ಲ ಅಗತ್ಯ ಕ್ರಮಗಳನ್ನು ಕೈಗೊಂಡಿದೆ. ಜೂನ್ 30ರಿಂದ ಜಿಲ್ಲೆಯ ಎಲ್ಲ ಮತಗಟ್ಟೆ ಮಟ್ಟದ ಅಧಿಕಾರಿಗಳು (ಬಿಎಲ್‌ಒಗಳು) ಮನೆ ಮನೆಗೆ ತೆರಳಿ ಮತದಾರರನ್ನು ಭೇಟಿ ಮಾಡುತ್ತಿದ್ದು, ಅವರಿಗೆ ಗಣತಿ ನಮೂನೆಗಳನ್ನು ವಿತರಿಸುವ ಜೊತೆಗೆ ಅಗತ್ಯ ದಾಖಲೆಗಳು, ವೈಯಕ್ತಿಕ

ಮಾಹಿತಿ ಹಾಗೂ ಭಾವಚಿತ್ರಗಳನ್ನು ಸಂಗ್ರಹಿಸಿ ಆನ್‌ಲೈನ್ ಸಾಫ್ಟ್‌ವೇರ್‌ನಲ್ಲಿ ದಾಖಲಿಸುವ ಕಾರ್ಯವನ್ನು ಸಮಥ-ರ್ವಾಗಿ ನಿರ್ವಹಿಸುತ್ತಿದ್ದಾರೆ ಎಂದು ಜಿಲ್ಲಾಧಿಕಾರಿ ವಿವ-ರಿಸಿದರು.

ಮತದಾರರ ಮಾಹಿತಿಯನ್ನು ಡಿಜಿಟಲ್ ರೂಪದಲ್ಲಿ ದಾಖಲಿಸುವ ಪ್ರಕ್ರಿಯೆಯೂ ವೇಗವಾಗಿ ಸಾಗುತ್ತಿದ್ದು, ಇದುವರೆಗೆ 3,18,978 ಮತದಾರರ ಮಾಹಿತಿಯನ್ನು ಯಶಸ್ವಿಯಾಗಿ ಸಾಫ್ಟ್‌ವೇರ್‌ನಲ್ಲಿ ದಾಖಲಿಸಲಾಗಿದೆ. ಇದು ಜಿಲ್ಲೆಯ ಒಟ್ಟು ಮತದಾರರ ಸಂಖ್ಯೆಯ ಶೇ.30ರಷ್ಟಾಗಿದ್ದು, ಮುಂದಿನ ಹತ್ತು ದಿನಗಳಲ್ಲಿ ಶೇ.100ರಷ್ಟು ಮಾಹಿತಿಯನ್ನು ಸಾಫ್ಟ್‌ವೇರ್‌ನಲ್ಲಿ ದಾಖಲಿಸುವ ಗುರಿಯನ್ನು ಜಿಲ್ಲಾಡಳಿತ ಹೊಂದಿದೆ ಎಂದು ತಿಳಿಸಿದರು.

ಈ ಗುರಿ ಸಾಧಿಸಲು ಅಗತ್ಯ ಕಾರ್ಯಯೋಜನೆ ಈಗಾಗಲೇ ರೂಪಿಸಲಾಗಿದ್ದು, ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಜವಾಬ್ದಾರಿಗಳನ್ನು ಹಂಚಿಕೆ ಮಾಡಲಾಗಿದೆ. ಕಂಪ್ಯೂಟರೀಕರಣ ಕಾರ್ಯವನ್ನು ಮತ್ತಷ್ಟು ವೇಗಗೊಳಿಸಲು ಅಗತ್ಯ ಮಾನವ ಸಂಪನ್ಮೂಲ ಹಾಗೂ ತಾಂತ್ರಿಕ ಸೌಲಭ್ಯಗಳನ್ನು ಸಮರ್ಪಕವಾಗಿ ಬಳಸಿಕೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಹೇಳಿದರು.

ಈ ಕಾರ್ಯದ ಯಶಸ್ಸಿಗೆ ಸಾರ್ವಜನಿಕರು, ಜನಪ್ರತಿನಿಧಿಗಳು, ಮತಗಟ್ಟೆ ಮಟ್ಟದ ಏಜೆಂಟರು (ಬಿಎಲ್‌ಎಗಳು) ಹಾಗೂ ವಿವಿಧ ಇಲಾಖೆಗಳ ಸಹಕಾರವೂ ಮಹತ್ವದ ಪಾತ್ರ ವಹಿಸಿದೆ. ವಿಶೇಷವಾಗಿ ಮತಗಟ್ಟೆ ಮಟ್ಟದ ಅಧಿಕಾರಿಗಳು ಅತ್ಯಂತ ಜವಾಬ್ದಾ-ರಿಯುತವಾಗಿ, ಸಮರ್ಪಣಾ ಮನೋಭಾವದಿಂದ ಕಾರ್ಯನಿರ್ವಹಿಸಿರುವುದರಿಂದಲೇ ಚಿಕ್ಕಬಳ್ಳಾಪುರ ಜಿಲ್ಲೆ ರಾಜ್ಯದಲ್ಲೇ ಪ್ರಥಮ ಸ್ಥಾನ ಪಡೆಯಲು ಸಾಧ್ಯವಾಗಿದೆ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಮತದಾರರ ಪಟ್ಟಿಯನ್ನು ನಿಖರ, ಸಮಗ್ರ ಹಾಗೂ ದೋಷರಹಿತವಾಗಿ ಸಿದ್ಧಪಡಿಸುವ ಉದ್ದೇಶದಿಂದ ಈ ವಿಶೇಷ ಪರಿಷ್ಕರಣೆ ಕಾರ್ಯವನ್ನು ಕೈಗೊಳ್ಳಲಾಗಿದೆ. ಆದ್ದರಿಂದ ಇನ್ನೂ ತಮ್ಮ ಮಾಹಿತಿಯನ್ನು ಸಲ್ಲಿಸದ ಮತದಾರರು ತಮ್ಮ ವ್ಯಾಪ್ತಿಯ ಮತಗಟ್ಟೆ ಮಟ್ಟದ ಅಧಿಕಾರಿಗಳನ್ನು ಸಂಪರ್ಕಿಸಿ ಅಗತ್ಯ ದಾಖಲೆಗಳು, ವೈಯಕ್ತಿಕ ಮಾಹಿತಿ ಹಾಗೂ ಭಾವಚಿತ್ರಗಳನ್ನು ಶೀಘ್ರವಾಗಿ ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿ ಮನವಿ ಮಾಡಿದರು.

ಮತದಾರರ ಸಕ್ರಿಯ ಸಹಕಾರದಿಂದ ಮಾತ್ರ ಈ ಕಾರ್ಯವನ್ನು ನಿಗದಿತ ಅವಧಿಯೊಳಗೆ ಯಶಸ್ವಿಯಾಗಿ ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ಎಲ್ಲ ಅರ್ಹ ಮತದಾರರ ವಿವರಗಳು ಮತದಾರರ ಪಟ್ಟಿಯಲ್ಲಿ ನಿಖರವಾಗಿ ದಾಖಲಾಗುವ ಮೂಲಕ ಪಾರದರ್ಶಕ ಹಾಗೂ ವಿಶ್ವಾಸಾರ್ಹ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವುದು ಜಿಲ್ಲಾಡಳಿತದ ಪ್ರಮುಖ ಉದ್ದೇಶವಾಗಿದೆ ಎಂದು ಜಿಲ್ಲಾಧಿಕಾರಿ ಜಿ. ಪ್ರಭು ತಿಳಿಸಿದರು.

ಜಿಲ್ಲೆಯ ಎಲ್ಲ ಮತದಾರರು ಈ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ಕೆ ಸಂಪೂರ್ಣ ಸಹಕಾರ ನೀಡಿ, ಅಗತ್ಯ ಮಾಹಿತಿಯನ್ನು ಸಮಯಕ್ಕೆ ಸರಿಯಾಗಿ ಒದಗಿಸುವ ಮೂಲಕ ಜಿಲ್ಲಾಡಳಿತದೊಂದಿಗೆ ಕೈಜೋಡಿಸುವಂತೆ ಅವರು ಮತ್ತೊಮ್ಮೆ ಮನವಿ ಮಾಡಿದ್ದಾರೆ.

ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಯಾವುದೇ ಅರ್ಹ ಮತದಾರರು ಹೊರಗುಳಿಯದಂತೆ ಜಿಲ್ಲಾಡಳಿತ ವಿಶೇಷ ಗಮನ ಹ-ರಿಸಿದೆ. ಮತಗಟ್ಟೆ ಮಟ್ಟದ ಅಧಿಕಾರಿಗಳಿಗೆ ಅಗತ್ಯ ತರಬೇತಿ ನೀಡಲಾಗಿದ್ದು, ಪ್ರತಿ ಮತಗಟ್ಟೆ ವ್ಯಾಪ್ತಿಯಲ್ಲಿ ದೈನಂದಿನ ಪ್ರಗತಿಯನ್ನು ಪರಿಶೀಲಿಸುವ ವ್ಯವಸ್ಥೆಯನ್ನು ರೂಪಿಸಲಾಗಿದೆ. ಅಧಿಕಾರಿಗಳ ಕಾರ್ಯಕ್ಷಮತೆಯನ್ನು ನಿರಂತರವಾಗಿ ಅವಲೋಕಿಸಿ, ನಿಗದಿತ ಗಡುವಿನೊಳಗೆ ಎಲ್ಲ ಕಾರ್ಯಗಳನ್ನು ಪೂರ್ಣಗೊಳಿಸುವಂತೆ ಸೂಚನೆ ನೀಡಲಾಗಿದೆ.

ಜಿಲ್ಲೆಯಲ್ಲಿ ಪರಿಷ್ಕರಣೆ ಕಾರ್ಯವು ಸುಗಮವಾಗಿ ಸಾಗುತ್ತಿರುವ ಹಿನ್ನೆಲೆಯಲ್ಲಿ ಉಳಿದಿರುವ ಮತದಾರರೂ ಸಹ ವಿಳಂಬ ಮಾಡದೆ ತಮ್ಮ ವಿವರಗಳನ್ನು ಸಲ್ಲಿಸುವಂತೆ ಜಿಲ್ಲಾಧಿಕಾರಿ ಮನವಿ ಮಾಡಿದ್ದಾರೆ. ಮತದಾರರ ಪಟ್ಟಿಯಲ್ಲಿ ಹೆಸರು, ವಿಳಾಸ, ವಯಸ್ಸು ಹಾಗೂ ಇತರೆ ಮಾಹಿತಿಗಳು ನಿಖರವಾಗಿರುವುದು ಪ್ರಜಾಪ್ರಭುತ್ವದ ದೃಷ್ಟಿಯಿಂದ ಅತ್ಯಂತ ಮಹತ್ವದ್ದಾಗಿದ್ದು, ಈ ಜವಾಬ್ದಾರಿಯುತ ಕಾರ್ಯದಲ್ಲಿ ಪ್ರತಿಯೊಬ್ಬ ಮತದಾರರು ಸಕ್ರಿಯವಾಗಿ ಭಾಗವಹಿಸಬೇಕು ಎಂದು ಅವರು ಕರೆ ನೀಡಿದ್ದಾರೆ.

ಎಸ್‌ಐಆರ್ ನೆಪದಲ್ಲಿ ರಾಜಕೀಯ: ಹೆಚ್‌ಡಿಕೆ ಟೀಕೆ

ಬೆಂಗಳೂರು: ಉತ್ತರ ಕರ್ನಾಟದ ಜಿಲ್ಲೆಗಳ ಅಭಿವೃದ್ಧಿಯತ್ತ ಗಮನಹರಿಸಿರುವ ಸಿಎಂ ಡಿಕೆ ಶಿವಕುಮಾರ್ ಸಿಎಂ ಆದ ಮೊದಲ ಬಾರಿಗೆ ಜಿಲ್ಲೆ ಜಿಲ್ಲೆಗೂ ಭೇಟಿ ಕೊಟ್ಟು ಪರಿಶೀಲನೆ ಮಾಡುತ್ತಿದ್ದಾರೆ. ಈ ಬಗ್ಗೆ ಪ್ರತಿಕ್ರಿಯಿಸಿರುವ ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ ಸಿಎಂ ಪ್ರವಾಸ ಮಾಡುತ್ತಿರುವುದು ಎಸ್‌ಐಆರ್ ದುರುಪಯೋಗ ಮಾಡಿಕೊಳ್ಳಲು. ಅಧಿಕಾರಿಗಳಿಗೆ ಸೂಚನೆ ನೀಡಲು ಜಿಲ್ಲಾ ಪ್ರವಾಸ ಮಾಡುತ್ತಿದ್ದಾರೆ ಎಂದು ಗಂಭೀರ ಆರೋಪ ಮಾಡಿದ್ದಾರೆ.

ಎಸ್‌ಐಆರ್ ದುರುಪಯೋಗ ಮಾಡಿಕೊಳ್ಳುವುದಕ್